ಸೇರಿದಂತೆ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರದ ಮೊತ್ತವನ್ನು ಮಂಜೂರು ಮಾಡಬೇಕೆಂದು ಕೋರುತ್ತೇನೆ."

ಅಧ್ಯಕ್ಷರು : ನಾನು 2003–04ನೇ ಸಾಳಿನ ಪೂರಕ ಅಂದಾಜು(ಅಂತಿಮ ಕಂತು) ಗಳನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ,

"ದಿನಾಂಕ 31.3.2004ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆ ಕ್ರಮಾಂಕ 1ರಿಂದ 5 ಹಾಗೂ 7 ರಿಂದ 29 ಇವುಗಳಿಗೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗೂ ಸೇರಿದಂತೆ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರದ ಮೊತ್ತವನ್ನು ಮಂಜರೂ ಮಾಡುವುದು"

ಪ್ರಸ್ತಾವ ಅಂಗೀಕರಿಸಲಾಯಿತು ಮತ್ತು ಬೇಡಿಕೆಗಳನ್ನು ಮಂಜೂರು ಮಾಡಲಾಯಿತು

3 ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

(i)ಕರ್ನಾಟಕ ಧನ ವಿನಿಯೋಗ ವಿಧೇಯಕ, 2004

ಶ್ರೀ ಎಸ್.ಎಂ. ಕೃಷ್ಣ :(ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) : ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2004ರ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) : ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ಧನ ವಿನಿಯೋಗ ವಿಧೇಯವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ಅನುಬಂಧ -V ವಿಧೇಯಕವನ್ನು ಮಂಡಿಸಲಾಗಿದೆ.

(ii)ಕರ್ನಾಟಕ ಧನ ವಿನಿಯೋಗ(ಲೇಖಾನುದಾನ) ವಿಧೇಯಕ, 2004

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) : ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ಧನ ವಿನಿಯೋಗ(ಲೇಖಾನುದಾನ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2004ರ ಕರ್ನಾಟಕ ಧನ ವಿನಿಯೋಗ(ಲೇಖಾನುದಾನ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) : ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ಧನ ವಿನಿಯೋಗ(ಲೇಖಾನುದಾನ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."